# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಸದಸ್ಯರ ಹೆಸರು | : ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 479 |
| ಉತ್ತರಿಸಬೇಕಾದ ದಿನಾಂಕ: | : 14.08.2025 |
| ಉತ್ತರಿಸುವ ಸಚಿವರು | : ಗೃಹ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಇತ್ತೀಚೆಗೆ ದರೋಡೆ, ಹಲ್ಲೆ, ಜೂಜಾಟ, ಗಾಂಜಾ ಪ್ರಕರಣಗಳು ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಬಂದಿದ್ದಲ್ಲಿ, ಇಂತಹ ಪ್ರಕರಣಗಳು ತಡೆಗಟ್ಟುವಲ್ಲಿ ಸರ್ಕಾರ ಕೈಗೊಂಡ ಕ್ರಮವೇನು?(ಮಾಹಿತಿ ನೀಡುವುದು) | ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಇತ್ತೀಚೆಗೆ **ದರೋಡೆ, ಹಲ್ಲೆ ಮತ್ತು ಜೂಜಾಟ**, ಪ್ರಕರಣಗಳು ವರದಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು, ಇಂತಹ ಪ್ರಕರಣಗಳ ತಡೆಗಟ್ಟುವಿಕೆಗೆ ಕೈಗೊಂಡ ಕ್ರಮಗಳು ಈ ಕೆಳಕಂಡಂತಿದೆ:-<br><br>1) ಅಪರಾಧ ಪ್ರಕರಣಗಳನ್ನು ತಡೆಗಟ್ಟಲು ಮುಂಜಾಗ್ರತಾ ಕ್ರಮಗಳು ವಹಿಸಲಾಗುತ್ತಿದೆ. ಸಮಾಜ ಘಾತುಕ ಕೃತ್ಯ ಎಸಗುವವರ ವಿರುದ್ಧ ರೌಡಿ ಹಾಳೆಯನ್ನು ತೆರೆಯಲಾಗಿದೆ ಹಾಗೂ ಗಡಿಪಾರು ಕೂಡ ಮಾಡಲಾಗಿದೆ ಮತ್ತು ಅವರುಗಳ ಚಲನ ವಲನಗಳ ಮೇಲೆ ಸೂಕ್ಷ್ಮ ನಿಗಾ ಇಡಲಾಗುತ್ತಿದೆ. ಬೀದರ ಜಿಲ್ಲೆಯಲ್ಲಿ ಕಳೆದ ವರ್ಷಗಳಿಗೆ ಹೋಲಿಸಿದ್ದಲ್ಲಿ ಪ್ರಸ್ತುತ ಸಾಲಿನಲ್ಲಿ ಪ್ರಕರಣಗಳಲ್ಲಿ ಇಳಿಮುಖವಾಗಿದೆ.<br><br>• ಅಪರಾಧ ಪ್ರಕರಣಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಈ- ಬೀಟ್ ಸಿಸ್ಟಮ್ (E-beat System) ಅನ್ನು ಅಳವಡಿಸಲಾಗಿದೆ.<br>• ಹೆಚ್ಚುವರಿ ಪೊಲೀಸ್ ಅಧೀಕ್ಷಕರು, ಅಪರಾಧ (Addl.SP,Crime and Traffic) ಹುದ್ದೆಯನ್ನು ಸೃಜಿಸಲಾಗಿದೆ.<br>• ತನಿಖಾ ಗುಣಮಟ್ಟವನ್ನು ಹೆಚ್ಚಿಸುವ ಸಲುವಾಗಿ Scene of Crime (SOCO) ಅಧಿಕಾರಿಗಳನ್ನು ನಿಯೋಜಿಸಿ ಜಿಲ್ಲೆಯಲ್ಲಿ ಘಟಿಸುವ ಎಲ್ಲಾ ಕೃತ್ಯ ಸ್ಥಳಗಳಿಗೆ ಭೇಟಿ ನೀಡಿ ತನಿಖೆಗೆ ಸಹಕರಿಸಲಾಗುತ್ತಿದೆ..<br>• ರಾತ್ರಿ ಗಸ್ತಿನಲ್ಲಿ ಅಪರಿಚಿತ ವ್ಯಕ್ತಿಗಳ (suspected persons) ಬೆರಳು ಮುದ್ರೆಗಳನ್ನು ಸಂಗ್ರಹಿಸಲು Finger scanner ಗಳನ್ನು ನೀಡಲಾಗಿದೆ. |

| | | |
|---|---|---|
| | | ಅಪರಿಚಿತ ವ್ಯಕ್ತಿಗಳು (suspected persons) ಅಪರಾಧಗಳಲ್ಲಿ ಭಾಗಿಯಾಗಿದ್ದಲ್ಲಿ ಸ್ಥಳದಲ್ಲಿಯೇ ಮಾಹಿತಿ ಪಡೆಯಲು ಸಹಕಾರಿಯಾಗಿದೆ.<br>• ಮಹಿಳಾ ಸಹಾಯವಾಣಿ,(1091) ಮಕ್ಕಳ ಸಹಾಯವಾಣಿ(1098) ಮತ್ತು ಹಿರಿಯ ನಾಗರೀಕರ ಸಹಾಯವಾಣಿ ( 1090 ) ಮತ್ತು ಸೈಬರ್ ಸಹಾಯವಾಣಿ (1930) ನಿರಂತರವಾಗಿ ಕರ್ತವ್ಯ ನಿರ್ವಹಿಸುತ್ತಿವೆ.<br>• ನಾಗರೀಕರ ವಿವಿಧ ತುರ್ತು ಪರಿಸ್ಥಿತಿಗಳನ್ನು ಪರಿಹರಿಸಲು ಏಕ ತುರ್ತು ಸಂಖ್ಯೆ (DIAL) 112 ERSS (Emergency Response Support System) ತುರ್ತು ಪ್ರತಿಕ್ರಿಯೆ ವ್ಯವಸ್ಥೆಯನ್ನು ಜಾರಿಗೊಳಿಸಲಾಗಿದೆ..<br>• ಈ ವ್ಯವಸ್ಥೆಯ ಅಡಿಯಲ್ಲಿ ERSS ವಾಹನಗಳು ಕಾರ್ಯ ನಿರ್ವಹಿಸುತ್ತಿದ್ದು, ಕರೆಗಳಿಗೆ ಕೂಡಲೇ ಸ್ಪಂದಿಸಿ ಸ್ಥಳಕ್ಕೆ ಭೇಟಿ ನೀಡಲಾಗುತ್ತಿದೆ. ಈ ವ್ಯವಸ್ಥೆಯಿಂದ ಅತ್ಯಂತ ಕಡಿಮೆ ಅವಧಿಯಲ್ಲಿ ನಗರದಲ್ಲಿ ಕೇವಲ 5 ನಿಮಿಷ 56 ಸೆಕೆಂಡ್ ಮತ್ತು ಗ್ರಾಮೀಣ ಭಾಗದಲ್ಲಿ 18 ನಿಮಿಷಗಳಲ್ಲಿ ಕರೆ ಮಾಡಿದ ಸ್ಥಳಗಳಿಗೆ ಭೇಟಿ ನೀಡಲಾಗುತ್ತಿದೆ.<br>• ಸುರಕ್ಷತೆ ಮತ್ತು ಅಪರಾಧಗಳನ್ನು ನಿಯಂತ್ರಿಸುವ ಸಲುವಾಗಿ ಸಿಸಿಟಿವಿ ಕ್ಯಾಮರಾಗಳನ್ನು (CCTV camera) ಅಳವಡಿಸಿ, ಅಪರಾಧಗಳನ್ನು ತಡೆಯಲು ನಿಗಾವಹಿಸಿ ಕ್ರಮ ಜರುಗಿಸಲಾಗುತ್ತಿದೆ.<br>• Karnataka Public Safety (Measures) Enforcement Act 2017 ರ ಅಡಿಯಲ್ಲಿ ಎಲ್ಲಾ ವಾಣಿಜ್ಯ ಸಂಸ್ಥೆ, ಕೈಗಾರಿಕೆ ಸಂಸ್ಥೆ, ಧಾರ್ಮಿಕ ಸ್ಥಳಗಳು, ಶೈಕ್ಷಣಿಕ ಸಂಸ್ಥೆಗಳು, ಆಸ್ಪತ್ರೆಗಳು, ಕ್ರೀಡಾ ಸಂಕೀರ್ಣಗಳಲ್ಲಿ ಈ ಅಧಿನಿಯಮದಂತೆ ಸಿಸಿಟಿವಿ ಕ್ಯಾಮರ ಅಳವಡಿಸಿರುವ ಬಗ್ಗೆ ಪರಿಶೀಲಿಸಿ ಕ್ರಮವಹಿಸಲಾಗಿದೆ.<br>• ರಾಜ್ಯದಲ್ಲಿ ಅಪರಾಧ ತಡೆಗಟ್ಟಲು ಮತ್ತು ಕಾನೂನು ಸುವ್ಯವಸ್ಥೆ ನಿಯಂತ್ರಿಸಲು ಚರಿತ್ರೆಹಾಳೆ ಅಸಾಮಿ, ರೌಡಿ ಪಟ್ಟಿ ಅಸಾಮಿ, ರೂಢಿಗತ ಅಪರಾಧಿ, ಪೂರ್ವಸಜೆ ಅಸಾಮಿ, ಕಮ್ಯುನಲ್ ಗೂಂಡಗಳ ವಿರುದ್ಧ BNSS/ ಅಡಿಯಲ್ಲಿ ಪ್ರಕರಣ ನೊಂದಾಯಿಸಿ ಸಮಾಜದಲ್ಲಿ ಶಾಂತಿ ಸುವ್ಯವಸ್ಥೆಯನ್ನು ಕಾಪಾಡುವ ಸಲುವಾಗಿ ಸದರಿಯವರುಗಳಿಂದ ಜಾಮೀನು ಮುಚ್ಚಳಿಕೆಯನ್ನು ಪಡೆದು ನಿಗಾವಹಿಸಿ ನಿಯಂತ್ರಣದಲ್ಲಿ ಇಡಲಾಗಿರುತ್ತದೆ.<br>• ಎಮ್‌ಓಬಿ (Modus Operandi) ಆಸಾಮಿಗಳ ವಿರುದ್ಧ ದಾಖಲಾತಿಗಳನ್ನು ನಿರ್ವಹಣೆ ಮಾಡಿ ಅಪರಾಧ ಚಟುವಟಿಕೆಗಳಲ್ಲಿ ಭಾಗಿಯಾಗದಂತೆ ನಿಗಾವಹಿಸಲಾಗುತ್ತಿದೆ.<br>• ಹೆದ್ದಾರಿ ಗಸ್ತು ವಾಹನ (Highway Patrolling Vehicle) ಕರ್ತವ್ಯ ನಿರ್ವಹಿಸುತ್ತಿದ್ದು, ಹೆದ್ದಾರಿಗಳಲ್ಲಿ ಜಿಲ್ಲೆಯ ಸಾರ್ವಜನಿಕ ಸುರಕ್ಷತೆಗೆ ಶ್ರಮಿಸಲಾಗುತ್ತಿದೆ.<br><br>**ಗಾಂಜಾ ಪ್ರಕರಣಗಳ ನಿಯಂತ್ರಣ ಕುರಿತಂತೆ ಸರ್ಕಾರವು ಕೆಳಕಂಡಂತೆ ಕ್ರಮಗಳನ್ನು ಕೈಗೊಂಡಂತಿರುತ್ತದೆ:-**<br><br>• ರಾಜ್ಯದಲ್ಲಿ ಮಾದಕ ವಸ್ತುಗಳ ನಿಯಂತ್ರಣ ಕುರಿತಂತೆ ಸರ್ಕಾರದ ಆದೇಶ **ಸಂಖ್ಯೆ: ಹೆಚ್‌ಡಿ /141/ಪಿಓಪಿ/2025 ದಿನಾಂಕ:01/08/2025** ರ ಕಾನೂನು ಮತ್ತು ಸುವ್ಯವಸ್ಥೆ ಪೊಲೀಸ್ ಠಾಣೆಗಳಲ್ಲಿ ನಾರ್ಕೋಟಿಕ್ಸ್ ಸಂಬಂಧ ದಾಖಲಾಗುವ ಪ್ರಕರಣಗಳ ಮೇಲ್ವಿಚಾರಣೆಗಾಗಿ ಮಾದಕ ವಸ್ತುಗಳ ವಿರೋಧಿ ಕಾರ್ಯಪಡೆ **(Anti Narcotic Task Force)** ಘಟಕವನ್ನು ಹೆಚ್ಚುವರಿ ಪೊಲೀಸ್ ಅಧೀಕ್ಷಕರು, ಪೊಲೀಸ್ ಉಪಧೀಕ್ಷಕರು ಮತ್ತು ಲಿಪಿಕ ಅಧಿಕಾರಿ/ಸಿಬ್ಬಂದಿಗಳನ್ನೊಳಗೊಂಡ 10 ಹುದ್ದೆಗಳೊಂದಿಗೆ ಸೃಜಿಸಲು |

ಮತ್ತು ಸದರಿ ಘಟಕಕ್ಕೆ ಅವಶ್ಯವಿರುವ ಪೊಲೀಸ್ ಅಧಿಕಾರಿ /ಸಿಬ್ಬಂದಿಗಳನ್ನು ಒಟ್ಟು 56 ಹುದ್ದೆಗಳನ್ನು ನಕ್ಸಲ್ ನಿಗ್ರಹ ಪಡೆ (**Anti Naxal Force**) ಘಟಕದಿಂದ ವರ್ಗಾಯಿಸಲು ಹಾಗೂ ಮಾದಕ ವಸ್ತುಗಳ ವಿರೋಧಿ ಕಾರ್ಯಪಡೆ (Anti Narcotic Task Force) ಘಟಕವು ಒಟ್ಟಾರೆಯಾಗಿ ಡಿಜಿ ಮತ್ತು ಐಜಿಪಿರವರ ಅಧೀನದಲ್ಲಿ ಕಾರ್ಯನಿರ್ವಹಿಸುವಂತೆ ಮತ್ತು ಡಿ.ಜಿ., ಸೈಬರ್ ಕಮಾಂಡ್‌ರವರಿಗೆ ಕಾರ್ಯವರದಿ ಮಾಡಿಕೊಳ್ಳುವಂತೆ ಆದೇಶಿಸಲಾಗಿರುತ್ತದೆ.

- ಮಾದಕ ಬೆಳೆಗಳ ಗುರುತಿಸುವಿಕೆ ಮತ್ತು ನಾಶ, ಅಕ್ರಮ ಮಾದಕ ವ್ಯಸನವನ್ನು ಪತ್ತೆಹಚ್ಚಲು ಮತ್ತು ನಿರ್ಮೂಲನೆ ಮಾಡಲು, ರಾಜ್ಯಾದ್ಯಂತ ಪೊಲೀಸ್ ಸಿಬ್ಬಂದಿಗೆ NCB (ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋ) ಆನ್ಲೈನ್ ತರಬೇತಿ ಕಾರ್ಯಕ್ರಮಗಳ ಮೂಲಕ ತರಬೇತಿ ನೀಡಲಾಗುತ್ತಿದೆ. ಈ ಉದ್ದೇಶಕ್ಕಾಗಿ NCB ಮೊಬೈಲ್ ಅಪ್ಲಿಕೇಶನ್/ವೆಬ್ ಪೋರ್ಟಲ್ MAPDRUGS ಗೆ ಸಹ ಅವುಗಳನ್ನು ಪರಿಚಯಿಸಲಾಗುತ್ತಿದೆ.
- ಸಾಮರ್ಥ್ಯ ನಿರ್ಮಾಣ ಕಾರ್ಯಾಗಾರಗಳು: ಮಾದಕವಸ್ತು ಸಂಬಂಧಿತ ಪ್ರಕರಣಗಳಲ್ಲಿ ರಾಜ್ಯ ಪೊಲೀಸರ ತನಿಖಾ ಸಾಮರ್ಥ್ಯಗಳನ್ನು ಹೆಚ್ಚಿಸಲು NCB ಮತ್ತು ಇತರ ಏಜೆನ್ಸಿಗಳ ಸಹಯೋಗದೊಂದಿಗೆ ಆರು ಕಾರ್ಯಾಗಾರಗಳನ್ನು ಆಯೋಜಿಸಲಾಗಿದೆ. ಉಪ ಅಧೀಕ್ಷಕರವರಿಗೆ, (ಡಿವೈಎಸ್ಪಿ) ಇನ್ಸ್ಪೆಕ್ಟರ್‌ಗಳು ಮತ್ತು ಅಬಕಾರಿ ಅಧಿಕಾರಿಗಳಿಗೆ ವಿಶೇಷ ತರಬೇತಿಯನ್ನು ನೀಡಲಾಗಿರುತ್ತದೆ. ಮತ್ತಷ್ಟು ಕಾರ್ಯಾಗಾರಗಳನ್ನು ಯೋಜಿಸಲಾಗಿದೆ.
- ಮಾದಕ ದ್ರವ್ಯ ಸೇವನೆ, ಮಾರಾಟ, ಸಂಗ್ರಹಣೆ ಮತ್ತು ಸರಬರಾಜು ಮಾಡುವವರ ವಿರುದ್ಧ ಕ್ರಮ ಕೈಗೊಳ್ಳುವ ಸಲುವಾಗಿ ಸಿಐಡಿ ಘಟಕದಲ್ಲಿ ವಿಶೇಷ ತರಬೇತಿ ನೀಡುವ ಸೌಲಭ್ಯವನ್ನು ಕಲ್ಪಿಸಲಾಗಿದೆ. ಈಗಾಗಲೇ ರಾಜ್ಯದಲ್ಲಿ 167 ಅಧಿಕಾರಿ/ಸಿಬ್ಬಂದಿಗಳಿಗೆ ತರಬೇತಿಯನ್ನು ನೀಡಲಾಗುತ್ತಿದೆ.
- ಜೂನ್ 26, 2024 ರಂದು " **ಡ್ರಗ್ ದುರುಪಯೋಗ ಮತ್ತು ಅಕ್ರಮ ಸಾಗಣಿಕೆ ವಿರುದ್ಧ ಅಂತರ ರಾಷ್ಟ್ರೀಯ ದಿನಾಚರಣೆ** " ಅಂಗವಾಗಿ ಶಾಲಾ, ಕಾಲೇಜು ವಿದ್ಯಾರ್ಥಿಗಳಿಗೆ ತರಬೇತಿ ಕಾರ್ಯಗಾರ ನಡೆಸಿ ತಿಳುವಳಿಕೆ ನೀಡಿ ಮನವರಿಕೆ ಮಾಡಿಕೊಡಲಾಗಿದೆ.
- NDPS ಪ್ರಕರಣಗಳಲ್ಲಿನ ಆರೋಪಿಗಳ ಮಾಹಿತಿಯನ್ನು ಪೊಲೀಸ್ ಐಟಿ ತಂತ್ರಾಂಶ/NIDAAN ಪೋರ್ಟಲ್ ನಲ್ಲಿ ದಾಖಲಿಸಿ ನಿರ್ವಹಿಸಲಾಗುತ್ತಿದೆ. ಆರೋಪಿಗಳ ದತ್ತಾಂಶ ವಿಶ್ಲೇಷಣೆ ಮಾಡಿ ಆರೋಪಿಗಳ ಚಲನವಲನಗಳ ಮೇಲೆ ನಿಗಾವಹಿಸಲಾಗಿದೆ.
- ಜಿಲ್ಲಾ ಮತ್ತು ರಾಜ್ಯಮಟ್ಟದಲ್ಲಿ NCORD (Narcotics Co-ordination) ಸಮಿತಿ ರಚನೆಗೊಂಡಿರುತ್ತದೆ. NDPS ಕಾಯ್ದೆ ಜಾರಿಗೊಳಿಸುವ ಸಂಬಂಧ ಇತರೆ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಕ್ರಮ ಕೈಗೊಳ್ಳಲಾಗುತ್ತಿರುತ್ತದೆ.
- PITNDPS ಅನ್ವಯ ವಾಗುವ ಆರೋಪಿಗಳ ವಿರುದ್ಧ ನಿಯಮಾನುಸಾರ ಬಂಧನ ಕ್ರಮ ಜರುಗಿಸಿ, ಹೈಕೋರ್ಟ್ ಸಲಹಾ ಸಮಿತಿ ನಿರ್ದೇಶನದಂತೆ ಬಂಧಿತ ಆರೋಪಿಯನ್ನು ಹಾಜರುಪಡಿಸಿ, ಸಮಿತಿಯ ಆದೇಶದಂತೆ ಕ್ರಮ ಜರುಗಿಸಲಾಗುತ್ತಿರುತ್ತದೆ.
- "**ಕರ್ನಾಟಕ ರಾಜ್ಯ ಪೊಲೀಸ್ "ಡ್ರಗ್ ಫ್ರೀ ಕರ್ನಾಟಕ ಆ್ಯಪ್**" ಜಾರಿಗೆ ತಂದಿರುತ್ತದೆ. ಪ್ಲೇ ಸ್ಟೋರ್‌ನಲ್ಲಿ ಉಚಿತವಾಗಿ ಲಭ್ಯವಿದ್ದು, ಇದರಲ್ಲಿ ಮಾದಕ ದ್ರವ್ಯಗಳ ಸಾಗಾಣಿಕೆ, ಮಾರಾಟ, ಸಂಗ್ರಹಣೆ, ಬೆಳೆಯುವುದು, ಸೇವನೆ, ಅಕ್ರಮ ಲ್ಯಾಬ್‌ಗಳ ಮಾಹಿತಿ ಇದ್ದಲ್ಲಿ

| | | |
|---|---|---|
| | | ಸಾರ್ವಜನಿಕರು ಇದರಲ್ಲಿ ವರದಿ ಮಾಡಬಹುದಾಗಿರುತ್ತದೆ. ಮಾಹಿತಿದಾರರ ಗೌಪ್ಯತೆ ಕಾಪಾಡಲಾಗುತ್ತದೆ. ಇದರಲ್ಲಿ ವರದಿಯಾಗುವ ಮಾಹಿತಿ ಮತ್ತು ದೂರನ್ನು ಆಧರಿಸಿ ನಿಯಮಗಳನುಸಾರ ಕಾನೂನು ಕ್ರಮ ಜರುಗಿಸಲಾಗುತ್ತಿರುತ್ತದೆ.<br>• ಎನ್ ಡಿ ಪಿ ಎಸ್ ಪ್ರಕರಣಗಳಲ್ಲಿ ಭಾಗಿಯಾಗುವ ವಿದೇಶಿ ಪ್ರಜೆಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ. ಭಾಗಿಯಾಗುವ ಆರೋಪಿಗಳನ್ನು ವಿದೇಶಿ ಪ್ರಜೆಗಳ ಕಾಯ್ದೆ ಅಡಿಯಲ್ಲಿ ಗಡಿಪಾರು ಪ್ರಕ್ರಿಯೆ ಕೈಗೊಳ್ಳಲು ಕ್ರಮ ಜರುಗಿಸಲಾಗುತ್ತಿರುತ್ತದೆ.<br>• ಬೀಟ್ ಸಭೆಗಳಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ಮನೆ ಮನೆಗೆ ಪೊಲೀಸ್ ಕಾರ್ಯಕ್ರಮದಡಿಯಲ್ಲಿ ಸಮೂಹಗಳಿಗೆ ಡ್ರಗ್ಸ್ ದುಷ್ಪರಿಣಾಮಗಳ ಬಗ್ಗೆ ಜಾಗೃತಿ, ಮಾಹಿತಿ ಹಾಗೂ ಕಾನೂನಿನ ಅರಿವು ಮೂಡಿಸಲಾಗುತ್ತಿದೆ.<br>• ಅಂತರರಾಜ್ಯ ಸಂಘಟಿತ ದಂಧೆಕೋರರುಗಳು ಮಾದಕ ದ್ರವ್ಯ ಮತ್ತು ನಿದ್ರಾಜನಕ ವಸ್ತುಗಳ ಮಾರಾಟ, ಸಾಗಾಣಿಕೆ, ದಾಸ್ತಾನು ಹಾಗೂ ಉತ್ಪಾದನೆ ಮಾಡುವ ಬಗ್ಗೆ ಸಹಭಾಗಿತ್ವ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಮಾಹಿತಿ ಕಲೆ ಹಾಕಲಾಗುತ್ತಿದೆ. ಈ ಸಂಘಟಿತ ಅಪರಾಧದಲ್ಲಿ ಭಾಗಿಯಾಗುವವರ ವಿರುದ್ಧ ಕಲಂ 111 ಭಾರತೀಯ ನ್ಯಾಯ ಸಂಹಿತೆ ಅಡಿಯಲ್ಲಿಯೂ ನಿಯಮಾನುಸಾರ ಕಠಿಣ ಕ್ರಮಗಳನ್ನು ಜರುಗಿಸಲು ಕ್ರಮ ಕೈಗೊಳ್ಳಲಾಗುತ್ತಿರುತ್ತದೆ.<br>• ನಗರ ಪ್ರದೇಶಗಳಲ್ಲಿ "ಹೈಡ್ರೋಪೋನಿಕ್" ಗಾಂಜಾ ಕಡಿವಾಣ ಹಾಕುವ ಬಗ್ಗೆ ಮಾಹಿತಿ ಸಂಗ್ರಹಿಸಿ ಕ್ರಮ ಜರುಗಿಸಲಾಗುತ್ತಿದೆ.<br>• ಅಂತರರಾಜ್ಯ ಡ್ರಗ್ಸ್ ಅಪರಾಧಿಕ ಜಾಲ ಭೇದಿಸಲು ರಸ್ತೆ ಮಾರ್ಗ, ವಾಯು ಮಾರ್ಗ, ಜಲ ಮಾರ್ಗ ಹಾಗೂ ರೈಲ್ವೆ ಮಾರ್ಗಗಳ ಮೇಲೆ ನಿಗಾವಹಿಸಲಾಗಿದೆ. ಈ ಕುರಿತು ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಹಭಾಗಿತ್ವ ಇಲಾಖೆಗಳ ಸಭೆಗಳಲ್ಲಿ ಮಾಹಿತಿ ವಿನಿಮಯ ಮಾಡಿ ಸಮನ್ವಯ ಸಾಧಿಸಿ ಅಗತ್ಯ ಕಾನೂನು ಕ್ರಮ ಜರುಗಿಸಲಾಗುತ್ತಿರುತ್ತದೆ. |

**ಸಂಖ್ಯೆ: ಹೆಚ್‌ಡಿ 403 ಎಸ್‌ಎಸ್‌ಟಿ 2025**

**(ಡಾ: ಜಿ. ಪರಮೇಶ್ವರ)**
**ಗೃಹ ಸಚಿವರು**